# ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು:560001

**ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಜಾ.ಸು/32544/ಇ.ವಿ.2020** **ದಿನಾಂಕ: 26-3-2020**

## ಸುತ್ತೋಲೆ

ವಿಷಯ: 2019-20ನೇ ಸಾಲಿಗೆ 7 ರಿಂದ 10ನೇ ತರಗತಿವರೆಗಿನ ಪರೀಕ್ಷೆಗಳು ಆರ್.ಟಿ.ಇ ಅಡಿಯಲ್ಲಿ ದಾಖಲಾತಿ/ 2020-21ನೇ ಸಾಲಿನ ದಾಖಲಾತಿ ಪ್ರಕ್ರಿಯೆಗಳನ್ನು ಮುಂದೂಡುವ ಬಗ್ಗೆ.

ಉಲ್ಲೇಖ: (1) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 14-3-2020.
(2) ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ7(8)/ಆರ್.ಟಿ.ಇ/2020-21/ಪ್ರ.ಪ್ರ.01/ 2019-20 ದಿನಾಂಕ: 24-3-2020

******

ನೋವೆಲ್ ಕರೋನಾ ವೈರಸ್‌ನ (COVID-19) ಸೋಂಕು ತಡಗಟ್ಟುವಿಕೆಗೆ ಮುಂಜಾಗ್ರತ ಕ್ರಮವಾಗಿ ಉಲ್ಲೇಖ (1)ರ ಸುತ್ತೋಲೆ ದಿನಾಂಕ: 14-3-2020ರಲ್ಲಿ 7 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ದಿನಾಂಕ: 31-3-2020ರವರೆಗೆ ಮುಂದೂಡಿ ಪರೀಕ್ಷಾ ಪೂರ್ವಸಿದ್ದತಾ ರಜೆಯನ್ನು ಘೋಷಿಸಲಾಗಿತ್ತು.

ಆದರೆ, ರಾಜ್ಯದಲ್ಲಿ ಕರೋನಾ ವೈರಸ್ ಹರಡುತ್ತಿರುವುದು ಮುಂದುವರೆಯುತ್ತಿರುವುದರಿಂದ ಹಾಗೂ ದಿನಾಂಕ: 15-4-2020ರವರೆಗೆ ಇಡೀ ರಾಷ್ಟ್ರವನ್ನು ಲಾಕ್‌ಡೌನ್ ಮಾಡುವಂತೆ ಮಾನ್ಯ ಪ್ರಧಾನ ಮಂತ್ರಿಗಳು ಘೋಷಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಪ್ರಕ್ರಿಯೆಗಳನ್ನು ದಿನಾಂಕ: 20-04-2020ರವರೆಗೆ ಮುಂದೂಡಲಾಗಿದೆ.

1. 7 ರಿಂದ 9ನೇ ತರಗತಿಯ ಪರೀಕ್ಷೆಗಳು
2. ಎಸ್.ಎಸ್.ಎಲ್.ಸಿ ಪರೀಕ್ಷೆಗಳು
3. ಆರ್.ಟಿ.ಇ ಅಡಿಯಲ್ಲಿ ಮಕ್ಕಳ ದಾಖಲಾತಿ ಪ್ರಕ್ರಿಯೆಗಳು ಹಾಗೂ
4. ಶಾಲೆಗಳಲ್ಲಿ 2020-21ನೇ ಸಾಲಿಗೆ ದಾಖಲಾತಿ ಪ್ರಕ್ರಿಯೆಗಳು.

ಮೇಲ್ಕಂಡ ಎಲ್ಲಾ ಪ್ರಕ್ರಿಯೆಗಳ ಪರಿಷ್ಕೃತ ವೇಳಾ ಪಟ್ಟಿಯನ್ನು ದಿನಾಂಕ: 20-4-2020ರ ನಂತರ ಪ್ರಕಟಿಸಲಾಗುವುದು.

ಈ ವಿಷಯವನ್ನು ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ವಾಟ್ಸ್‌ಆಪ್/ಎಸ್.ಎಂ.ಎಸ್/ಇಮೇಲ್ ಅಥವಾ ಇತರೆ ಎಲೆಕ್ಟ್ರಾನಿಕ್ ಮಾಧ್ಯಮದ ಮೂಲಕ ರವಾನಿಸಲು ಶಾಲಾ ಮುಖ್ಯ ಶಿಕ್ಷಕರು/ಶಾಲಾ ಆಡಳಿತ ಮಂಡಳಿಯವರಿಗೆ ಸೂಚಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
2. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ರವರಿಗೆ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
5. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

**ಪ್ರತಿಯನ್ನು**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸನ್ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ.